**All India Radio: Bangalore**
**National Bulletin In Kannada**
**16.09.2026 1.10 p.m.**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**16.09.2026 1.10 p.m.**

**<><><><>**

ಮುಖ್ಯಾಂಶಗಳು

1. ನವದೆಹಲಿಯಲ್ಲಿ ನಾಳೆ ಸೆಮಿಕಾನ್ ಇಂಡಿಯಾ ೨೦೨೬ರ ಐದನೇ ಆವೃತ್ತಿಗೆ ಪ್ರಧಾನಿ ನರೇಂದ್ರ ಮೋದಿ ಚಾಲನೆ
2. ಭಾರತದೊಂದಿಗಿನ ಮುಕ್ತ ವ್ಯಾಪಾರ ಒಪ್ಪಂದ ಜಾರಿಗೆ ತರುವ ಮಸೂದೆಗೆ ನ್ಯೂಜಿಲೆಂಡ್ ಸಂಸತ್ತು ಅಂಗೀಕಾರ
3. ಭೂತಾನ್ ವಿದೇಶಾಂಗ ಸಚಿವರೊಂದಿಗೆ ಇಂದು ವಿದೇಶಾಂಗ ವ್ಯವಹಾರಗಳ ಸಚಿವ ಡಾ.ಎಸ್.ಜೈಶಂಕರ್ ಮಾತುಕತೆ
4. ಭಾರತೀಯ ಸೇನಾ ಮುಖ್ಯಸ್ಥ ಜನರಲ್ ಧೀರಜ್ ಸೇಠ್ ಇಂದಿನಿಂದ ರಷ್ಯಾಗೆ ಮೂರು ದಿನಗಳ ಅಧಿಕೃತ ಪ್ರವಾಸ

<><><><>

ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ನವದೆಹಲಿಯ ಯಶೋಭೂಮಿಯಲ್ಲಿ ನಾಳೆ ಸೆಮಿಕಾನ್ ಇಂಡಿಯಾ ೨೦೨೬ರ ಐದನೇ ಆವೃತ್ತಿಯನ್ನು ಉದ್ಘಾಟಿಸಲಿದ್ದಾರೆ. ಮೂರು ದಿನಗಳ ಈ ಸಮ್ಮೇಳನ, ಜಾಗತಿಕ ಅರೆವಾಹಕ ಮತ್ತು ಎಲೆಕ್ಟ್ರಾನಿಕ್ಸ್ ಕ್ಷೇತ್ರದಲ್ಲಿ ಸಹಕಾರ ಉತ್ತೇಜನ, ನಾವೀನ್ಯತೆಗೆ ಚಾಲನೆ, ಉತ್ಪಾದನಾ ಸಾಮರ್ಥ್ಯ ಬಲಪಡಿಸುವುದು, ಹೂಡಿಕೆ ಆಕರ್ಷಣೆ ಹಾಗೂ ಭವಿಷ್ಯಕ್ಕೆ ಸಜ್ಜಾದ ಪ್ರತಿಭೆಗಳನ್ನು ರೂಪಿಸುವ ಪ್ರಮುಖ ವೇದಿಕೆಯಾಗಲಿದೆ. ಕಾರ್ಯಕ್ರಮದಲ್ಲಿ ೬೦೦ಕ್ಕೂ ಹೆಚ್ಚು ಪ್ರದರ್ಶಕರು, ೩೦೦ಕ್ಕೂ ಅಧಿಕ ಅಂತಾರಾಷ್ಟ್ರೀಯ ಕಂಪನಿಗಳು ಹಾಗೂ ೪೦ಕ್ಕೂ ಹೆಚ್ಚು ದೇಶಗಳ ಪ್ರತಿನಿಧಿಗಳು ಭಾಗವಹಿಸಲಿವೆ. ಪ್ರದರ್ಶನದಲ್ಲಿ ಆರು ದೇಶಗಳ ಮಳಿಗೆಗಳು, ೧೨ ರಾಜ್ಯ ಸರ್ಕಾರಗಳ ಮಳಿಗೆಗಳು ಹಾಗೂ ಪ್ರತ್ಯೇಕ ಸ್ಟಾರ್ಟ್‌ಅಪ್ ಮಳಿಗೆ ಇರಲಿವೆ. ಭಾರತ ಅರೆವಾಹಕ ಮಿಷನ್, ವಿದ್ಯುನ್ಮಾನ ಮತ್ತು ಮಾಹಿತಿ ತಂತ್ರಜ್ಞಾನ ಸಚಿವಾಲಯ ಹಾಗೂ ವಿವಿಧ ಸಂಸ್ಥೆಗಳು ಜಂಟಿಯಾಗಿ ಸೆಮಿಕಾನ್ ಇಂಡಿಯಾ ಸಮ್ಮೇಳನ ಮತ್ತು ಪ್ರದರ್ಶನವನ್ನು ಆಯೋಜಿಸಿವೆ. ಕಾರ್ಯಕ್ರಮದಲ್ಲಿ ಚರ್ಚಾ ಗೋಷ್ಠಿಗಳು ಹಾಗೂ ಅಧಿವೇಶನಗಳು ನಡೆಯಲಿವೆ. ಅರೆವಾಹಕ ತಯಾರಿಕೆ ಮತ್ತು ತಂತ್ರಜ್ಞಾನ ಸೇರಿದಂತೆ ಅರೆವಾಹಕ ಹಾಗೂ ಎಲೆಕ್ಟ್ರಾನಿಕ್ಸ್ ಕ್ಷೇತ್ರದಲ್ಲಿನ ಉದಯೋನ್ಮುಖ ಪ್ರವೃತ್ತಿಗಳು ಮತ್ತು ಪ್ರಮುಖ ವಿಷಯಗಳ ಕುರಿತು ಚರ್ಚೆ ನಡೆಯಲಿದೆ. ಭಾರತೀಯ ಮತ್ತು ಅಂತಾರಾಷ್ಟ್ರೀಯ ಕಂಪನಿಗಳಿಗೆ ಪಾಲುದಾರಿಕೆ, ಹೂಡಿಕೆ ಅವಕಾಶಗಳು ಹಾಗೂ ತಂತ್ರಜ್ಞಾನ ಸಹಯೋಗಗಳನ್ನು ಅನ್ವೇಷಿಸಲು ಈ ಕಾರ್ಯಕ್ರಮ ಪ್ರಮುಖ ವೇದಿಕೆಯಾಗಲಿದೆ. ಜಾಗತಿಕ ವಿಶ್ವಾಸಾರ್ಹ ಅರೆವಾಹಕ ಪಾಲುದಾರನಾಗಿ ಭಾರತದ ಸ್ಥಾನವನ್ನು ಮತ್ತಷ್ಟು ಬಲಪಡಿಸಲು ಇದು ಸಹಕಾರಿಯಾಗಲಿದೆ.

<><><>

ನ್ಯೂಜಿಲೆಂಡ್ ಸಂಸತ್ತು ಭಾರತದೊಂದಿಗಿನ ಮುಕ್ತ ವ್ಯಾಪಾರ ಒಪ್ಪಂದವನ್ನು ಜಾರಿಗೆ ತರುವ ಮಸೂದೆಯನ್ನು ಅಂಗೀಕರಿಸಿದೆ. ಇದು ಸುಂಕಗಳಲ್ಲಿ ಗಮನಾರ್ಹ ಕಡಿತ ಮತ್ತು ಉಭಯ ದೇಶಗಳ ನಡುವೆ ವ್ಯಾಪಾರ ವಿಸ್ತರಣೆಗೆ ದಾರಿ ಮಾಡಿಕೊಡಲಿದೆ.  ವಿರೋಧ ಪಕ್ಷವಾದ ಲೇಬರ್ ಪಕ್ಷದ ಬೆಂಬಲದೊಂದಿಗೆ ಈ ಮಸೂದೆಯು ೯೩-೨೯ ಮತಗಳ ಅಂತರದಿಂದ ಅಂಗೀಕಾರಗೊಂಡಿತು. ಈ ಒಪ್ಪಂದವು ರಫ್ತುದಾರರಿಗೆ "ತಕ್ಷಣದ ಮತ್ತು ಗಣನೀಯ" ಪ್ರಯೋಜನಗಳನ್ನು ಒದಗಿಸಲಿದೆ ಎಂದು ನ್ಯೂಜಿಲೆಂಡ್ ಹಣಕಾಸು ಸಚಿವ ಟಾಡ್ ಮೆಕ್‌ಕ್ಲೇ ತಿಳಿಸಿದ್ದಾರೆ. ಉತ್ತಮ ಗುಣಮಟ್ಟದ ಈ ವ್ಯಾಪಾರ ಒಪ್ಪಂದವು ಈ ವರ್ಷದ ನಂತರ ಜಾರಿಗೆ ಬರುವ ನಿರೀಕ್ಷೆಯಿದೆ ಎಂದು ಅವರು ಹೇಳಿದ್ದಾರೆ.

<><><>

ವಿದೇಶಾಂಗ ವ್ಯವಹಾರಗಳ ಸಚಿವ ಡಾ.ಎಸ್.ಜೈಶಂಕರ್ ಅವರು ಇಂದಿನಿಂದ ಎರಡು ದಿನಗಳ ಅಧಿಕೃತ ಪ್ರವಾಸಕ್ಕಾಗಿ ಭೂತಾನ್‌ಗೆ ತೆರಳಲಿದ್ದಾರೆ. ಭೇಟಿಯ ಸಂದರ್ಭದಲ್ಲಿ ಸಚಿವರು, ಭೂತಾನ್ ವಿದೇಶಾಂಗ ಸಚಿವ ಲ್ಯೋನ್ಪೊ ಡಿ.ಎನ್.ಧುಂಗ್ಯೆಲ್ ಅವರೊಂದಿಗೆ ದ್ವಿಪಕ್ಷೀಯ ಮಾತುಕತೆ ನಡೆಸಲಿದ್ದಾರೆ. ಭೂತಾನ್‌ನ ರಾಜರಿಂದ ರಾಜಮನೆತನದ ಗೌರವ ಸ್ವೀಕರಿಸಲಿರುವ ಸಚಿವ ಜೈಶಂಕರ್, ಭೂತಾನ್ ಪ್ರಧಾನಮಂತ್ರಿಯವರನ್ನೂ ಭೇಟಿಯಾಗಲಿದ್ದಾರೆ. ಭಾರತ ಮತ್ತು ಭೂತಾನ್ ನಡುವಿನ ನಿಯಮಿತ ಉನ್ನತ ಮಟ್ಟದ ವಿನಿಮಯದ ಪರಂಪರೆಗೆ ಅನುಗುಣವಾಗಿ ಈ ಭೇಟಿ ನಡೆಯುತ್ತಿದೆ.  ಉಭಯ ದೇಶಗಳ ನಡುವಿನ ನಿಕಟ ಸ್ನೇಹ ಮತ್ತು ಸಹಕಾರದ ಬಾಂಧವ್ಯವನ್ನು ಮತ್ತಷ್ಟು ಬಲಪಡಿಸುವುದು ಭೇಟಿಯ ಉದ್ದೇಶವಾಗಿದೆ ಎಂದು ವಿದೇಶಾಂಗ ವ್ಯವಹಾರಗಳ ಸಚಿವಾಲಯ ತಿಳಿಸಿದೆ.

<><><>

ಭಾರತೀಯ ಸೇನಾ ಮುಖ್ಯಸ್ಥ ಜನರಲ್ ಧೀರಜ್ ಸೇಠ್ ಇಂದಿನಿಂದ ಇದೇ ೧೮ರವರೆಗೆ ರಷ್ಯಾಕ್ಕೆ ಮೂರು ದಿನಗಳ ಅಧಿಕೃತ ಪ್ರವಾಸ ಕೈಗೊಂಡಿದ್ದಾರೆ. ಪ್ರವಾಸದ ಸಂದರ್ಭದಲ್ಲಿ ಜನರಲ್ ಧೀರಜ್ ಸೇಠ್, ರಷ್ಯಾದ ಭೂಸೇನಾ ಮುಖ್ಯಸ್ಥ ಕರ್ನಲ್ ಜನರಲ್ ಆಂಡ್ರೇ ನಿಕೊಲಾಯೆವಿಚ್ ಮೊಡ್ವಿಚೆವ್ ಅವರೊಂದಿಗೆ ಪರಸ್ಪರ ಹಿತಾಸಕ್ತಿಯ ವಿಷಯಗಳ ಕುರಿತು ಚರ್ಚೆ ನಡೆಸಲಿದ್ದಾರೆ. ವೃತ್ತಿಪರ ಸೇನಾ ಸಹಕಾರ ಮತ್ತು ತರಬೇತಿ ಸೇರಿದಂತೆ ವಿವಿಧ ವಿಚಾರಗಳು ಮಾತುಕತೆಯಲ್ಲಿ ಒಳಗೊಂಡಿರಲಿವೆ. ಮಾಸ್ಕೋದಲ್ಲಿ ಅವರಿಗೆ ಗೌರವ ವಂದನೆ ಸ್ವೀಕಾರ ಸಮಾರಂಭ ನಡೆಯಲಿದ್ದು, ಹುತಾತ್ಮ ಯೋಧರಿಗೆ ಗೌರವ ಸಲ್ಲಿಸಲಿದ್ದಾರೆ. ರಕ್ಷಣಾ ಸಚಿವಾಲಯದ ಪ್ರಕಾರ, ಸೇನಾ ಮುಖ್ಯಸ್ಥರು ಮಾಸ್ಕೋದಲ್ಲಿರುವ ರಾಷ್ಟ್ರೀಯ ರಕ್ಷಣಾ ನಿಯಂತ್ರಣ ಕೇಂದ್ರಕ್ಕೂ ಭೇಟಿ ನೀಡಲಿದ್ದಾರೆ. ರಷ್ಯಾದ ರಕ್ಷಣಾ ಸಚಿವಾಲಯದ ಹಿರಿಯ ಅಧಿಕಾರಿಗಳೊಂದಿಗೆ ಅವರು ಸಂವಾದ ನಡೆಸಲಿದ್ದಾರೆ. ರಕ್ಷಣಾ ಉದ್ಯಮ ಮತ್ತು ಖರೀದಿ ವ್ಯವಹಾರಗಳನ್ನು ನೋಡಿಕೊಳ್ಳುವ ರಕ್ಷಣಾ ಉಪ ಸಚಿವ ಸೆರ್ಗೆಯೆವಿಚ್ ಒಸ್ಮಾಕೋವ್ ಅವರೊಂದಿಗೂ ಮಾತುಕತೆ ನಡೆಸಲಿದ್ದಾರೆ. ಈ ಸಭೆಗಳು ಸಮಕಾಲೀನ ಸೇನಾ ಬೆಳವಣಿಗೆಗಳ ಕುರಿತು ಅಭಿಪ್ರಾಯ ವಿನಿಮಯ ಮಾಡಿಕೊಳ್ಳಲು ಹಾಗೂ ರಕ್ಷಣಾ ಸಹಕಾರವನ್ನು ಮತ್ತಷ್ಟು ವಿಸ್ತರಿಸುವ ಮಾರ್ಗಗಳನ್ನು ಅನ್ವೇಷಿಸಲು ಅವಕಾಶ

ಒದಗಿಸಲಿವೆ ಎಂದು ಸಚಿವಾಲಯ ತಿಳಿಸಿದೆ. ಭಾರತ ಮತ್ತು ರಷ್ಯಾ ನಡುವಿನ ದೀರ್ಘಕಾಲದ ರಕ್ಷಣಾ ಪಾಲುದಾರಿಕೆ ಹಾಗೂ ಉಭಯ ದೇಶಗಳ ಸೇನಾ ಸಹಕಾರವನ್ನು ಮತ್ತಷ್ಟು ಬಲಪಡಿಸುವುದು ಈ ಭೇಟಿಯ ಉದ್ದೇಶವಾಗಿದೆ ಎಂದು ರಕ್ಷಣಾ ಸಚಿವಾಲಯ ತಿಳಿಸಿದೆ.

<><><>

ವಿಶ್ವ ಓಝೋನ್ ದಿನವನ್ನು ಇಂದು ಜಗತ್ತಿನಾದ್ಯಂತ ಆಚರಿಸಲಾಗುತ್ತಿದೆ. ಭೂಮಿಯ ಮೇಲಿನ ಜೀವ ಸಂಕುಲವನ್ನು ರಕ್ಷಿಸುವಲ್ಲಿ ಓಝೋನ್ ಪದರದ ಮಹತ್ವದ ಕುರಿತು ಜಾಗೃತಿ ಮೂಡಿಸುವುದು ಈ ದಿನದ ಮುಖ್ಯ ಉದ್ದೇಶವಾಗಿದೆ. ೨೦೨೫ರ ವಿಶ್ವ ಓಝೋನ್ ದಿನದ ಧ್ಯೇಯವಾಕ್ಯ 'ತಂಪಾದ ಗ್ರಹಕ್ಕಾಗಿ ಜಾಗತಿಕ ಕ್ರಮ' ಎಂಬುದಾಗಿದ್ದು, ಓಝೋನ್ ಪದರದ ರಕ್ಷಣೆಯಲ್ಲಿ ಅಂತಾರಾಷ್ಟ್ರೀಯ ಸಹಕಾರದಿಂದ ಸಾಧಿಸಿರುವ ಪ್ರಗತಿಯನ್ನು ಒತ್ತಿಹೇಳುತ್ತದೆ. ಜೊತೆಗೆ, ಓಝೋನ್ ಸಂರಕ್ಷಣೆಯನ್ನು ಹವಾಮಾನ ಬದಲಾವಣೆ ತಡೆಗಟ್ಟುವ ಕ್ರಮಗಳೊಂದಿಗೆ ಸಂಯೋಜಿಸುತ್ತದೆ. ಪರಿಸರ ಸ್ನೇಹಿ ತಂತ್ರಜ್ಞಾನಗಳು ಮತ್ತು ಸುರಕ್ಷಿತ ಪರ್ಯಾಯಗಳ ಬಳಕೆಯನ್ನು ಉತ್ತೇಜಿಸುತ್ತದೆ. ಓಝೋನ್ ಪದರವು ಸೂರ್ಯನಿಂದ ಬರುವ ಹಾನಿಕಾರಕ ನೇರಳಾತೀತ ಕಿರಣಗಳನ್ನು ತಡೆದು ಭೂಮಿಯ ಮೇಲಿನ ಜೀವ ಸಂಕುಲಕ್ಕೆ ರಕ್ಷಣೆ ನೀಡುತ್ತದೆ. ಈ ನೈಸರ್ಗಿಕ ರಕ್ಷಣಾ ಕವಚವು ಚರ್ಮದ ಕ್ಯಾನ್ಸರ್, ಕಣ್ಣಿನ ಪೊರೆ ಹಾಗೂ ಪರಿಸರ ವ್ಯವಸ್ಥೆಗಳಿಗೆ ಉಂಟಾಗುವ ಹಾನಿಯ ಅಪಾಯವನ್ನು ಗಣನೀಯವಾಗಿ ತಗ್ಗಿಸುತ್ತದೆ.

<><><>

ವಿಶ್ವ ಓಝೋನ್ ದಿನದ ಅಂಗವಾಗಿ, ಹಾನಿಕಾರಕ ನೇರಳಾತೀತ ಕಿರಣಗಳ ವಿರುದ್ಧ ಓಝೋನ್ ಪದರವು ರಕ್ಷಣಾ ಕವಚವಾಗಿದೆ ಎಂದು ಕೇಂದ್ರ ಪರಿಸರ, ಅರಣ್ಯ ಮತ್ತು ಹವಾಮಾನ ಬದಲಾವಣೆ ಖಾತೆ ರಾಜ್ಯ ಸಚಿವ ಕೀರ್ತಿ ವರ್ಧನ್ ಸಿಂಗ್ ಹೇಳಿದ್ದಾರೆ. ಓಝೋನ್ ಪದರದ ಸಂರಕ್ಷಣೆ ಪ್ರತಿಯೊಂದು ಮನೆಯಲ್ಲಿಯೇ ಆರಂಭವಾಗುತ್ತದೆ ಎಂಬುದನ್ನು ವಿಶ್ವ ಓಝೋನ್ ದಿನ ನೆನಪಿಸುತ್ತದೆ ಎಂದು ಸಾಮಾಜಿಕ ಮಾಧ್ಯಮದಲ್ಲಿ ತಿಳಿಸಿದ್ದಾರೆ.

<><><>

ಉಜ್ಬೇಕಿಸ್ತಾನದ ಸಮರ್‌ಖಂಡ್‌ನಲ್ಲಿ ೪೬ನೇ ಫಿಡೆ ಚೆಸ್ ಒಲಿಂಪಿಯಾಡ್ ಆರಂಭವಾಗಿದೆ. ಪಂದ್ಯ ಆರಂಭಕ್ಕೂ ಮುನ್ನ ಉಜ್ಬೇಕಿಸ್ತಾನದ ಗ್ರ್ಯಾಂಡ್ ಮಾಸ್ಟರ್ ಸಿಂಡರೋವ್ ಅವರಿಗೆ ಎಐಸಿಎಫ್ ಅಧ್ಯಕ್ಷ ನಿತಿನ್ ನಾರಂಗ್ ಜ್ಯೋತಿಯನ್ನು ಹಸ್ತಾಂತರಿಸಿದರು. ಈ ಕ್ರೀಡಾಕೂಟದಲ್ಲಿ ಒಂದು ಸಾವಿರದ ೯೮೦ ಸ್ಪರ್ಧಿಗಳು ಭಾಗವಹಿಸುವ ನಿರೀಕ್ಷೆಯಿದೆ. ಮುಕ್ತ ವಿಭಾಗದಲ್ಲಿ ೨೦೮ ತಂಡಗಳು, ಮಹಿಳಾ ವಿಭಾಗದಲ್ಲಿ ೧೯೧ ತಂಡಗಳು ಪಾಲ್ಗೊಳ್ಳಲಿವೆ. ಮುಕ್ತ ಹಾಗೂ ಮಹಿಳಾ ವಿಭಾಗಗಳಲ್ಲಿ ಭಾರತ ಹಾಲಿ ಚಾಂಪಿಯನ್ ಆಗಿದ್ದು, ಪ್ರಶಸ್ತಿ ಗಳಿಸುವ ನೆಚ್ಚಿನ ತಂಡವಾಗಿದೆ.

<><><>

ಮೆಕ್ಕಾ ಸಮೀಪ ನಿನ್ನೆ ಹೌತಿ ಬಂಡುಕೋರರ ಡ್ರೋನ್‌ವೊಂದನ್ನು ತನ್ನ ವಾಯು ರಕ್ಷಣಾ ವ್ಯವಸ್ಥೆಗಳು ಪತ್ತೆಹಚ್ಚಿ ಧ್ವಂಸಗೊಳಿಸಿವೆ ಎಂದು ಸೌದಿ ಅರೇಬಿಯಾ ತಿಳಿಸಿದೆ. ಯೆಮನ್‌ನಲ್ಲಿ ಸರ್ಕಾರವನ್ನು ಬೆಂಬಲಿಸುವ ಮೈತ್ರಿಪಡೆಗಳ ವಕ್ತಾರ ಮೇಜರ್ ಜನರಲ್ ತುರ್ಕಿ ಅಲ್-ಮಾಲಿಕಿ ಮಾತನಾಡಿ, ಇದು ಮೆಕ್ಕಾ ಮೇಲೆ ಹೌತಿಗಳು ನಡೆಸಲು ಯತ್ನಿಸಿದ ಎರಡನೇ ದಾಳಿಯಾಗಿದೆ ಎಂದು ಹೇಳಿದ್ದಾರೆ. ಮುಂದಿನ ಯಾವುದೇ ದಾಳಿಗಳ ವಿರುದ್ಧ ಅಗತ್ಯ ಕ್ರಮ

ಕೈಗೊಳ್ಳುವುದಾಗಿ ಸೌದಿ ನೇತೃತ್ವದ ಮೈತ್ರಿಪಡೆ ಎಚ್ಚರಿಕೆ ನೀಡಿದೆ. ಆದರೆ, ಮೆಕ್ಕಾವನ್ನು ಗುರಿಯಾಗಿಸಿಕೊಂಡು ದಾಳಿ ನಡೆಸಿರುವುದನ್ನು ಹೌತಿಗಳು ನಿರಾಕರಿಸಿದ್ದಾರೆ. ಸೌದಿ ಅರೇಬಿಯಾ ಮತ್ತು ಹೌತಿಗಳ ನಡುವಿನ ಸಂಘರ್ಷ ತೀವ್ರಗೊಂಡಿರುವ ಸಂದರ್ಭದಲ್ಲೇ ಈ ಘಟನೆ ನಡೆದಿದೆ.

<><><><>

ರಷ್ಯಾ ಮತ್ತು ಉಕ್ರೇನ್ ಇಂಧನ ಮೂಲಸೌಕರ್ಯಗಳ ಮೇಲೆ ಪರಸ್ಪರ ದಾಳಿ ನಡೆಸಿವೆ. ಕೈವ್‌ನಲ್ಲಿರುವ ಪೆಟ್ರೋಲ್ ಬಂಕ್‌ಗಳ ಮೇಲೆ ರಷ್ಯಾ ದಾಳಿ ಮಾಡಿದರೆ, ರಷ್ಯಾದ ತೈಲ ಸಂಸ್ಕರಣಾಗಾರವನ್ನು ಗುರಿಯಾಗಿಸಿಕೊಂಡು ಉಕ್ರೇನ್ ದಾಳಿ ನಡೆಸಿದೆ. ಕೈವ್ ಮತ್ತು ಉಕ್ರೇನ್‌ನ ಇತರ ನಗರಗಳ ಮೇಲೆ ರಾತ್ರಿಯಿಡೀ ಸುಮಾರು ೨೦೦ ಡ್ರೋನ್‌ಗಳಿಂದ ರಷ್ಯಾ ದಾಳಿ ನಡೆಸಿದ್ದು, ಇಬ್ಬರು ಸಾವನ್ನಪ್ಪಿದ್ದಾರೆ. ಪೆಟ್ರೋಲ್ ಬಂಕ್‌ಗಳ ಜೊತೆಗೆ, ರಷ್ಯಾದ ದಾಳಿಗಳು ಇತರ ಪ್ರದೇಶಗಳಲ್ಲಿನ ಇಂಧನ ಮತ್ತು ಬಂದರು ಮೂಲಸೌಕರ್ಯಗಳ ಮೇಲೂ ಪರಿಣಾಮ ಬೀರಿವೆ ಎಂದು ಉಕ್ರೇನ್ ಅಧಿಕಾರಿಗಳು ತಿಳಿಸಿದ್ದಾರೆ. ಇನ್ನೊಂದೆಡೆ, ವೋಲ್ಗಾ ನದಿಯ ಉದ್ದಕ್ಕೂ ಇರುವ ರಷ್ಯಾದ ಸಮಾರಾ ಪ್ರದೇಶದ ಸಿಜ್ರಾನ್‌ನಲ್ಲಿರುವ ತೈಲ ಸಂಸ್ಕರಣಾಗಾರಗಳ ಮೇಲೆ ಉಕ್ರೇನ್ ದಾಳಿ ನಡೆಸಿದೆ. ಅಲ್ಲದೇ, ಟ್ಯಾಗನ್‌ರೋಗ್ ಮತ್ತು ಓರಿಯೋಲ್ ಪ್ರದೇಶಗಳಲ್ಲಿ ಡ್ರೋನ್ ಉತ್ಪಾದನೆಯಲ್ಲಿ ತೊಡಗಿರುವ ಸೌಲಭ್ಯಗಳ ಮೇಲೂ ಡ್ರೋನ್ ಮೂಲಕ ದಾಳಿ ನಡೆಸಲಾಗಿದೆ ಎಂದು ಉಕ್ರೇನ್ ಅಧ್ಯಕ್ಷ ವೊಲೊಡಿಮಿರ್ ಝೆಲೆನ್ಸ್ಕಿ ತಿಳಿಸಿದ್ದಾರೆ. ಸೋಮವಾರವಷ್ಟೇ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಮಾತನಾಡಿ, ರಷ್ಯಾ ಮತ್ತು ಉಕ್ರೇನ್ ಪರಸ್ಪರರ ಇಂಧನ ಮೂಲಸೌಕರ್ಯದ ಮೇಲಿನ ದಾಳಿಗಳನ್ನು ನಿಲ್ಲಿಸಲು ಒಪ್ಪಿಕೊಂಡಿವೆ ಎಂದು ಹೇಳಿದ್ದರು. ಆದರೂ ದಾಳಿಗಳು ಮುಂದುವರಿದಿವೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>